## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯಲ್ಲಿನ ಕೋರ್ ಫಾಕಲ್ಟಿ ಹುದ್ದೆಗಳಿಗೆ ಬಾಹ್ಯ ಮೂಲದಿಂದ ಒಪ್ಪಂದ/ಸಲಹಾ ಸೇವೆ ಮೇರೆಗೆ ಸೇವೆಗಳನ್ನು ಪಡೆದುಕೊಳ್ಳಲು ಆಯ್ಕೆ ಸಮಿತಿಯನ್ನು ಪುನರ್‌ರಚಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 60 ತಾಪಸ 2010, ದಿನಾಂಕ:30.04.2011

**ಪ್ರಸ್ತಾವನೆ :**

ಅಧಿಕಾರ ವಿಕೇಂದ್ರೀಕರಣ / ಪಂಚಾಯತ್ ರಾಜ್ ವ್ಯವಸ್ಥೆಯ ಯಶಸ್ವಿ ಅನುಷ್ಠಾನದಲ್ಲಿ ಕರ್ನಾಟಕ ರಾಜ್ಯವು ದೇಶದಲ್ಲಿ ಸದಾ ಮುಂಚೂಣಿಯಲ್ಲಿದೆ. ಕರ್ನಾಟಕ ಪಂಚಾಯತ್ ರಾಜ್ ವ್ಯವಸ್ಥೆಯಡಿ ಅಧಿಕ ಸಂಖ್ಯೆಯ ಭಾಗೀದಾರರು ವಿವಿಧ ಹಂತಗಳಲ್ಲಿ ತಮ್ಮನ್ನು ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಕರ್ನಾಟಕ ಪಂಚಾಯತ್ ರಾಜ್ ವ್ಯವಸ್ಥೆಯ ಯಶಸ್ವಿ ಅನುಷ್ಠಾನದ ಹಿನ್ನೆಲೆಯಲ್ಲಿ ಹಲವಾರು ಸುಧಾರಣಾ ಪರಿಕ್ರಮಗಳನ್ನು ಅನುಸರಿಸಲಾಗುತ್ತಿದೆ. ಈ ಪೈಕಿ ಪಂಚಾಯತ್ ರಾಜ್ ವ್ಯವಸ್ಥೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು, ಅಧಿಕಾರಿಗಳು/ನೌಕರರು ಮತ್ತು ಇತರೆ ಎಲ್ಲಾ ಭಾಗೀದಾರರ ಸಾಮರ್ಥ್ಯವನ್ನು ಹೆಚ್ಚಳ ಮಾಡಿ ಅವರ ಸೇವೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಬಳಸಿಕೊಂಡು ಗ್ರಾಮೀಣ ಭಾಗದ ಜನರಿಗೆ ಉತ್ತಮ ಗುಣಮಟ್ಟದ ಸೇವೆಗಳನ್ನು ಒದಗಿಸುವುದು ಒಂದು ಪ್ರಮುಖವಾದ ಅಂಶವಾಗಿದೆ. ಪಂಚಾಯತ್ ರಾಜ್ ವ್ಯವಸ್ಥೆಯ ಎಲ್ಲಾ ಭಾಗೀದಾರರುಗಳ ಸಾಮರ್ಥ್ಯವನ್ನು ವೃದ್ಧಿಸಲು ಹಾಗು ಇಲಾಖೆಯ ನೀತಿ ನಿರೂಪಣೆಗಳಲ್ಲಿ ಸಹಾಯ ಮಾಡಲು ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಹಯೋಗದಲ್ಲಿ ರಾಜ್ಯದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯನ್ನು ಮೈಸೂರಿನಲ್ಲಿ ಸ್ಥಾಪಿಸಲಾಗಿದೆ. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯಲ್ಲಿ ಬೋಧನಾ ಕಾರ್ಯಗಳಿಗಾಗಿ ಐದು ಕೋರ್ ಫ್ಯಾಕಲ್ಟಿ ಹುದ್ದೆಗಳನ್ನು ಸೃಜಿಸಲಾಗಿದೆ. ಈ ಹುದ್ದೆಗಳನ್ನು ಸರ್ಕಾರದ ಇತರೆ ಇಲಾಖೆಗಳಿಂದ ನಿಯೋಜನೆ ಮೂಲಕ ಹಾಗು ಬಾಹ್ಯ ಸಂಪನ್ಮೂಲದಿಂದ ಒಪ್ಪಂದ/ಸಮಾಲೋಚನಾ ಸೇವೆಗಳನ್ನು ಪಡೆದು ಭರ್ತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯಲ್ಲಿನ ಕೋರ್ ಫ್ಯಾಕಲ್ಟಿ ಹುದ್ದೆಗಳಿಗೆ ಬಾಹ್ಯ ಮೂಲದಿಂದ ಒಪ್ಪಂದ/ಸಮಾಲೋಚನಾ ಆಧಾರದಲ್ಲಿ ಸೇವೆಗಳನ್ನು ಪಡೆಯುವಾಗ ಸೂಕ್ತ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಓದಲಾದ ಸರ್ಕಾರದ ಆದೇಶದ ಮೂಲಕ ಆಯ್ಕೆ ಸಮಿತಿಯನ್ನು ರಚನೆ ಮಾಡಿ ಆದೇಶಿಸಲಾಗಿದೆ. ದಿನಾಂಕ:16.08.2013ರಂದು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಮಗ್ರ ವಿಷಯಗಳ ಬಗ್ಗೆ ಚರ್ಚಿಸಲು ಆಯೋಜಿಸಲಾಗಿದ್ದ ಸಭೆಯಲ್ಲಿ ಕೋರ್ ಫ್ಯಾಕಲ್ಟಿ ಹುದ್ದೆಗಳಿಗೆ ಸೇವೆಯನ್ನು ಪಡೆಯುವ ಬಗ್ಗೆ ಚರ್ಚೆಗೆ ಬಂದು ಓದಲಾದ ಸರ್ಕಾರದ ಆದೇಶದ ಮೂಲಕ ರಚಿಸಲಾಗಿರುವ ಆಯ್ಕೆ ಸಮಿತಿಯನ್ನು ಪುನರ್‌ರಚಿಸಲು ತೀರ್ಮಾನಿಸಲಾಯಿತು. ಅದಕ್ಕಾಗಿ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 92 ತಾಪಸ 2013, ಬೆಂಗಳೂರು, ದಿನಾಂಕ:05.10.2013**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯಲ್ಲಿನ ಕೋರ್ ಫ್ಯಾಕಲ್ಟಿ ಹುದ್ದೆಗಳಿಗೆ ಬಾಹ್ಯ ಮೂಲದಿಂದ ಒಪ್ಪಂದ/ಸಮಾಲೋಚನಾ ಆಧಾರದಲ್ಲಿ ಸೇವೆಗಳನ್ನು ಪಡೆಯುವಾಗ ಸೂಕ್ತ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು -ಈ ಕೆಳಗಿನ ಕೋಷ್ಟಕದಲ್ಲಿ ನಮೂದಿಸಿದ ಪ್ರಕಾರ ಆಯ್ಕೆ ಸಮಿತಿಯನ್ನು ಪುನರ್‌ರಚಿಸಿ ಆದೇಶಿಸಲಾಗಿದೆ.

| ಕ್ರ ಸಂ. | ಅಧಿಕಾರಿಗಳು | ಸಮಿತಿಯಲ್ಲಿನ ಅಧಿಕಾರಯುಕ್ತ ಸ್ಥಾನ |
|---|---|---|
| 1 | ಮಹಾನಿರ್ದೇಶಕರು ಅ.ನ.ಸಾ.ರಾ.ಗ್ರಾ.ಸಂಸ್ಥೆ, ಮೈಸೂರು | ಅಧ್ಯಕ್ಷರು |
| 2 | ನಿರ್ದೇಶಕರು(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ | ಸದಸ್ಯರು |
| 3 | ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಹೈದರಾಬಾದ್‌ನ ಪ್ರತಿನಿಧಿ | ಸದಸ್ಯರು |
| 4 | ನಿರ್ದೇಶಕರು, ಅ:ನ.ಸಾ.ರಾ.ಗ್ರಾ.ಸಂಸ್ಥೆ, ಮೈಸೂರು | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

S Raveendrakumar 7/x/13

(ಎಸ್. ರವೀಂದ್ರ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ.),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ :**

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಹಾನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು.
3) ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು.
4) ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
5) ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಸಂಸ್ಥೆ. ಹೈದ್ರಾಬಾದ್.
6) ಇಲಾಖಾ ವೆಬ್‌ಸೈಟ್/ ಕರ್ನಾಟಕ ವಿಕಾಸ ಮಾಸಪತ್ರಿಕೆ.
7) ಕಛೇರಿ / ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ :**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗು ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರುಗಳ ಆಪ್ತ ಕಾರ್ಯದರ್ಶಿಗಳು.